ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ರೈತರ ಆತ್ಮಹತ್ಯೆ, ಆಕಸ್ಮಿಕ ಮರಣ ಹಾಗೂ ಹುಲ್ಲಿನ ಬಣವೆ ನಷ್ಟ ಪರಿಹಾರ ನೀಡುವ ಬಗ್ಗೆ

ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-

369 (303) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿನ ರೈತರ ಆತ್ಮಹತ್ಯೆ, ಆಕಸ್ಮಿಕ ಮರಣ ಹಾಗೂ ಹುಲ್ಲಿನ ಬಣವೆ ನಷ್ಟ ಪರಿಹಾರ ನೀಡುವ ಯೋಜನೆಯು ಕೃಷಿ ಇಲಾಖೆಯಿಂದ ಕಂದಾಯ ಇಲಾಖೆಗೆ ವರ್ಗಾವಣೆ ಆಗಿದೆಯೇ; ಯಾವಾಗ ಆಗಿದೆ; (ವಿವರ ನೀಡುವುದು)

(ಆ) ಕಂದಾಯ ಇಲಾಖೆಗೆ ವರ್ಗಾವಣೆಗೊಂಡ ನಂತರ ಸದರಿ ಪ್ರಕರಣಗಳಲ್ಲಿ ಪರಿಹಾರ ನೀಡಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿಶೇಷವಾಗಿ ಮದ್ದೂರು ತಾಲ್ಲೂಕಿನಲ್ಲಿ ವಿಳಂಬವಾಗುತ್ತಿರುವ ಕುರಿತು)

(ಇ) ವಿಳಂಬವಿಲ್ಲದೆ ಕೂಡಲೇ ಪರಿಹಾರ ವಿತರಿಸಲು ಇಲಾಖೆಯು ಕೈಗೊಂಡ ಕ್ರಮಗಳೇನು ?